26

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ -(ಕೋವಿಡ್-19)

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 3/9/2020

ಗೋವಾ ಸಿಎಂಗೆ ಕೊರೊನಾ ಸೋಂಕು ದೃಢ

ಉವಾ 3/9/20

ಪಣಜಿ: ಗೋವಾ ಸಿಎಂ ಪ್ರಮೋದ ಸಾವಂತ್ ಅವರಿಗೆ ಬುಧವಾರ ಕೊರೊನಾ ಸೋಂಕು ದೃಢಪಟ್ಟಿದೆ. ಈ ಕುರಿತು ತಮ್ಮ ಟ್ವಿಟರ್ ಖಾತೆಯಲ್ಲಿ ಹೇಳಿಕೊಂಡಿದ್ದು ನನಗೆ ಕೊರೊನಾ ಸೋಂಕು ದೃಢಪಟ್ಟಿದೆ. ಯಾವುದೇ ಸೋಂಕಿನ ಲಕ್ಷಣಗಳಿಲ್ಲ, ಈ ಹಿನ್ನೆಲೆಯಲ್ಲಿ ನನ್ನ ಮನೆಯಲ್ಲಿ ಪ್ರತ್ಯೇಕ ಕೊಠಡಿಯಲ್ಲಿರಲು ಬಯಸಿದ್ದು ಇಲ್ಲಿಂದಲೇ ಕೆಲಸ ನಿರ್ವಹಿಸಲಿದ್ದೇನೆ. ನನ್ನ ನಿಕಟ ಸಂಪರ್ಕಕ್ಕೆ ಬಂದವರು ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಪ್ರಮೋದ ಸಾವಂತ್ ಮನವಿ ಮಾಡಿದ್ದಾರೆ.

ಶಾಸಕಿ ನಿಂಬಾಳ್ಕರಗೂ ಕೋವಿಡ್ ಸೋಂಕು

ಬೆಳಗಾವಿ: ಖಾನಾಪುರ ಕಾಂಗ್ರೆಸ್ ಶಾಸಕಿ ಅಂಜಲಿ ನಿಂಬಾಳ್ಕರಗೂ ಕೊರೊನಾ ಸೋಂಕು ದೃಢಪಟ್ಟಿದೆ. ನನಗೆ ಯಾವುದೇ ರೋಗ ಲಕ್ಷಣಗಳಿಲ್ಲ, ಹೋಂ ಕ್ವಾರಂಟೈನ್ ಆಗಿದ್ದೇನೆ. ಗುಣಮುಖ ಆಗುವವರೆಗೆ ಮನೆಯಿಂದಲೇ ಕರ್ತವ್ಯ ನಿರ್ವಹಿಸುವುದಾಗಿ ತಿಳಿಸಿದ್ದಾರೆ. ತಮ್ಮ ಸಂಪರ್ಕಕ್ಕೆ ಬಂದಿರುವವರು ತಪ್ಪದೇ ಪರೀಕ್ಷೆ ಮಾಡಿಸಿಕೊಳ್ಳಬೇಕು, ಅಗತ್ಯ ಮುಂಜಾಗ್ರತೆ ಕ್ರಮ ಕೈಗೊಳ್ಳಬೇಕೆಂದು ಮನವಿ ಮಾಡಿದ್ದಾರೆ.